ಕರ್ನಾಟಕ ಸರ್ಕಾರ

(ಕಂದಾಯ ಇಲಾಖೆ)

ತಹಶೀಲ್ದಾರವರ ನ್ಯಾಯಾಲಯ ಕೂಡ್ಲಿಗಿ

ಸಂ/ಕಂ/ಪಹಣಿ:ವಿವಾದ/05/2015-16. ದಿನಾಂಕ: 28-06-2016.

| ವಾದಿಗಳು | ಪ್ರತಿವಾದಿಗಳು |
|---|---|
| ಮೂಗಪ್ಪ ತಂದೆ ಲೇಟ್ ಉಪ್ಪಾರ ಸಣ್ಣ ಹನುಮಂತಪ್ಪ<br>ಹಿರೇಹೆಗ್ಡಾಳ್ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಕೂಡ್ಲಿಗಿ |
| ಕೂಡ್ಲಿಗಿ ತಾಲೂಕು ಹಿರೇಹೆಗ್ಡಾಳ್ ಗ್ರಾಮದ ಸನಂ 31ಎ/1. 145. 347ಎ/7. ವಿಸ್ತೀರ್ಣ 3-18. 1-02. 0-20. ಎಕ್ರೆ ಜಮೀನುಗಳನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಹಿರೇಹೆಗ್ಡಾಳ್ ಗ್ರಾಮದ ಸನಂ 31ಎ/1. 145. 347ಎ/7. ವಿಸ್ತೀರ್ಣ 3-18. 1-02. 0-20. ಎಕ್ರೆ ಜಮೀನುಗಳನ್ನು ಸದರಿ ಗ್ರಾಮದ ಮೂಗಪ್ಪ ತಂದೆ ಲೇಟ್ ಉಪ್ಪಾರ ಸಣ್ಣ ಹನುಮಂತಪ್ಪ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಹಿರೇಹೆಗ್ಡಾಳ್ ಇವರು ನಮೂನೆ-21 ರ ನೋಟಿಸನ್ನು ದಿನಾಂಕ 26-12-2014 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಅರ್ಜಿದಾರರು ಮರಣ ಪ್ರಮಾಣ ಪತ್ರ ಲಗತ್ತಿಸಿಲ್ಲದ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 23/2014-15. ದಿನಾಂಕ 27-07-2015 ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 29-04-2015. ರಿಂದ 28-06-2016. ರ ವರೆಗೆ ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಗೂ ಅವರ ಪರ ನ್ಯಾಯಾವಾದಿಗಳು ಹಾಜರಾಗಿರುತ್ತಾರೆ. ಅರ್ಜಿದಾರರ ಪರ ನ್ಯಾಯಾವಾದಿಗಳು ಹಿರೇಹೆಗ್ಡಾಳ್ ಗ್ರಾಮದ ಸನಂ 31ಎ/1. 145. 347ಎ/7. ವಿಸ್ತೀರ್ಣ 3-18. 1-02. 0-20. ಎಕ್ರೆ ಜಮೀನುಗಳು ಅರ್ಜಿದಾರರ ತಂದೆಯವರಾದ ಉಪ್ಪಾರ ಸಣ್ಣ ಹನುಮಂತಪ್ಪ ತಂದೆ ಬಸಪ್ಪ. ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇರುತ್ತದೆ. ಇವರು ದಿನಾಂಕ 03-05-1986 ರಂದು ಹಾಗೂ ಇವರ ಹೆಂಡತಿಯಾದ ಕರಿಯವ್ವ ಗಂಡ ಸಣ್ಣ ಹನುಮಂತಪ್ಪ ಇವರು ದಿನಾಂಕ 31-12-1997 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನುಗಳ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಪರ ನ್ಯಾಯಾವಾದಿಗಳ ಹೇಳಿಕೆಗಳನ್ನು ಕೇಳಿ ಸದರಿ ಅರ್ಜಿದಾರರ ವಾರಸುದಾರರ ಮರಣ ಪ್ರಮಾಣ ಪತ್ರಗಳನ್ನು ಸಲ್ಲಿಸಿರುವ ಕಾರಣ ಈ ಕೆಳಗಿನಂತೆ ಆದೇಶ ಮಾಡಲಾಗಿದೆ.

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಹಿರೇಹೆಗ್ಡಾಳ್ ಗ್ರಾಮದ ಸನಂ 31ಎ/1. 145. 347ಎ/7. ವಿಸ್ತೀರ್ಣ 3-18. 1-02. 0-20. ಎಕ್ರೆ ಜಮೀನುಗಳನ್ನು ಪೋತಿವಾರಸು ಹಕ್ಕಿನ ಪ್ರಕಾರ ಅರ್ಜಿದಾರರಾದ ಉಪ್ಪಾರ ಮೂಗಪ್ಪ ತಂದೆ ಲೇಟ್ ಉಪ್ಪಾರ ಸಣ್ಣ ಹನುಮಂತಪ್ಪ ಇವರ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಲು ಆದೇಶಿಸಲಾಗಿದೆ. .

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 28-06-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ತಹಸೀಲ್ದಾರರು ಕೂಡ್ಲಿಗಿ
ತಹಸೀಲ್ದಾರರು, ಕೂಡ್ಲಿಗಿ.

ಇದರ ಪ್ರತಿಯನ್ನು:

1) ಅರ್ಜಿದಾರರಾದ ಉಪ್ಪಾರ ಮೂಗಪ್ಪ ತಂದೆ ಲೇಟ್ ಉಪ್ಪಾರ ಸಣ್ಣ ಹನುಮಂತಪ್ಪ ಹಿರೇಹೆಗ್ಡಾಳ್ ಗ್ರಾಮ ಕೂಡ್ಲಿಗಿ ತಾಲೂಕು ಇವರ ಪರ ವಕೀಲರಾದ ಎಸ್.ಮಲ್ಲಿಕರ್ಜುನ ವಕೀಲರು ಕೂಡ್ಲಿಗಿ ಇವರ ದ್ವಾರ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಕೂಡ್ಲಿಗಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕವೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.

ದೃಢೀಕೃತ ಪ್ರತಿ

ಶಿರಸ್ತೇದಾರರು
ತಾಲೂಕು ಕಛೇರಿ
ಕೂಡ್ಲಿಗಿ.